# ದೊಡ್ಡ ಗಾತ್ರದ ಗೇರು ತಳಿ ಸಂಶೋಧನೆ

## ಪುತ್ತೂರಿನ ಗೇರು ಸಂಶೋಧನಾ ನಿರ್ದೇಶನಾಲಯದ ಸಾಧನೆ

■ **ವಿಕ ಸುದ್ದಿಲೋಕ** ಪುತ್ತೂರು

ಭಾರತೀಯ ಕೃಷಿ ಸಂಶೋಧನಾ ಪರಿಷತ್ (ಐಸಿಎಆರ್) ಅಡಿ ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪುತ್ತೂರಿನ ರಾಷ್ಟ್ರೀಯ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ(ಡಿಸಿಆರ್) ಹೊಸ ತಳಿಯ ಗೇರುಬೀಜ ಸಂಶೋಧನೆ ಮಾಡಲಾಗಿದೆ. ದೊಡ್ಡ ಗಾತ್ರದ ಬೀಜವಿರುವ ಈ ತಳಿಯನ್ನು ನೇತ್ರಾ ಜಂಬೋ-1 ಎಂದು ಹೆಸರಿಸಲಾಗಿದೆ ಎಂದು ಕೇಂದ್ರದ ತೋಟ ಗಾರಿಕಾ ವಿಭಾಗದ ಪ್ರಧಾನ ವಿಜ್ಞಾನಿ ಡಾ. ದಿನಕರ ಅಡಿಗ ಹೇಳಿದ್ದಾರೆ.

6ರಿಂದ 8 ಗ್ರಾಂ ತೂಕದ ಬೀಜಗಳು ಗೇರಿನಲ್ಲಿ ಸಾಮಾನ್ಯ. ಆದರೆ ಬೀಜದ ಗಾತ್ರ ಹೆಚ್ಚಿಸಿದರೆ ರೈತರಿಗೆ ಲಾಭವಿದೆ. ಕಡಿಮೆ ಬೀಜ ಹೆಕ್ಕಿ ಜಾಸ್ತಿ ತೂಕ ಗಳಿಸಬಹುದು. ಮಾರುಕಟ್ಟೆಯಲ್ಲಿ ದೊಡ್ಡ ಬೀಜಗಳಿಗೆ ಹೆಚ್ಚಿನ ದರ ಸಿಗುತ್ತದೆ. ಇದರ ಸಂಸ್ಕರಣೆಯೂ ಸುಲಭವಿದೆ. ಇದನ್ನೆಲ್ಲ ಮನಗಂಡು ದೊಡ್ಡ ಬೀಜ ಬಿಡುವ ನೇತ್ರಾ ಜಂಬೋ-1 ತಳಿಯನ್ನು ನಮ್ಮ ತಂಡ ಬಿಡುಗಡೆ ಮಾಡಿದೆ ಎಂದವರು ತಿಳಿಸಿದ್ದಾರೆ.

ಈ ತಳಿಯಲ್ಲಿ 12 ಗ್ರಾಂ ತೂಕದ ಬೀಜಗಳಿರುತ್ತವೆ. ಶೇ.90ಕ್ಕೂ ಹೆಚ್ಚಿನ ಬೀಜಗಳದ್ದು ಒಂದೇ ಗಾತ್ರ. 100 ಕೆಜಿ ಬೀಜ ಸಂಸ್ಕರಣೆಯಿಂದ 29ರಿಂದ 30 ಕೆಜಿ ತಿರುಳು ಸಿಗುತ್ತದೆ. ಈಗಿರುವ ರಫ್ತು ಗುಣಮಟ್ಟಕ್ಕಿಂತ (ಡಬ್ಲ್ಯೂ- 180) ಹೆಚ್ಚಿನ ಗ್ರೇಡ್ ಡಬ್ಲ್ಯೂ 130 ಈ ತಳಿಯ ತಿರುಳಿನದ್ದಾಗಿದೆ. ಈ ತಳಿಯಲ್ಲಿ ಹೆಕ್ಟೇರ್‌ಗೆ 2 ಟನ್ ಇಳುವರಿ ಸಿಗಲಿದೆ. ಹಣ್ಣಿನ ತೂಕ 100 ಗ್ರಾಂಗಿಂತ ಜಾಸ್ತಿ ಇದ್ದು, ಕೆಂಪು ಬಣ್ಣ ಹೊಂದಿದೆ.

ಬೀಜ ಹೆಕ್ಕುವಾಗ 1 ಟನ್ ಇಳುವರಿಗೆ 16 ಸಾವಿರ



ಪುತ್ತೂರಿನ ರಾಷ್ಟ್ರೀಯ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ(ಡಿಸಿಆರ್) ಸಂಶೋಧನೆ ಮಾಡಲಾದ ಹೊಸ ತಳಿಯ ಗೇರುಬೀಜ.

ರೂ. ಕೂಲಿ ಖರ್ಚನ್ನು ಉಳಿಸುತ್ತದೆ. ಈಗಿನ ಮಾರುಕಟ್ಟೆ ದರದಲ್ಲಿ ದೊಡ್ಡ ಗಾತ್ರದ ಬೀಜಕ್ಕೆ 1 ಟನ್‌ಗೆ 10 ಸಾವಿರ ರೂ ಜಾಸ್ತಿ ಸಿಗುತ್ತದೆ. ಒಟ್ಟು 26 ಸಾವಿರ ರೂ.ಗಳಷ್ಟು ಲಾಭ 1 ಟನ್‌ಗೆ ಸಿಗುತ್ತದೆ.

ಗೇರಿನಲ್ಲಿ ಸದ್ಯ ಕೃಷಿ ಮಾಡುತ್ತಿರುವ ತಳಿಗಳಾದ ಭಾಸ್ಕರ, ವಿಆರ್‌ಐ-3, ಉಳ್ಳಾಲ-3 ಇತ್ಯಾದಿಗಳು ಬಹುತೇಕ ಸಣ್ಣ ಹಾಗೂ ಮಧ್ಯಮ ಗಾತ್ರದವು. ಹಾಗಾಗಿ ಈ ದೊಡ್ಡ ಗಾತ್ರದ ಬೀಜದ ತಳಿ ಒಣಭೂಮಿ ಕೃಷಿಯಲ್ಲಿ ಹೊಸ ಭರವಸೆ ಹುಟ್ಟಿಸಬಲ್ಲುದು. ಪ್ರಸ್ತುತ ಇದಕ್ಕೆ ತಳಿ ಹಕ್ಕಿನ ರಕ್ಷಣೆ ಪಡೆಯುವ ಹಂತದಲ್ಲಿದ್ದೇವೆ. ಅದಾದ ನಂತರ ಆಸಕ್ತರಿಗೆ ವಿತರಿಸಲಾಗುವುದು ಎಂದವರು ತಿಳಿಸಿದ್ದಾರೆ.